ಓ.ಎಸ್ ನಂಬರ್ಃ 71/2018

ಪಿ ಡಬ್ಲ್ಯೂಃ 1

ಇಂದು ದಿನಾಂಕಃ 18.11.2019 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿಯ ಪರ ಶ್ರೀ ಬಿ ಎಸ್ ಬಿ ವಕೀಲರಿಂದಃ

ನಾನು ನನ್ನ ಮೌಖಿಕ ವಿಚಾರಣೆಯ ಬದಲಾಗಿ ನನ್ನ ಸಾಕ್ಷಿ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳನ್ನು ನಾನೇ ಖುದ್ದಾಗಿ ವಕೀಲರಿಗೆ ತಿಳಿಯಿಸಿ, ಬರೆಯಿಸಿರುತ್ತೇನೆ. ಅದರಲ್ಲಿರುವ ಅಂಶಗಳೆಲ್ಲವೂ ನಿಜವಿದ್ದು, ಅದರಲ್ಲಿರುವ ಸಹಿಯು ನನ್ನದೇ ಆಗಿರುತ್ತದೆ. ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಶಾನೀಕರಿಸಬೇಕೆಂದು ವಿನಂತಿಸಿಕೊಳ್ಳುತ್ತೇನೆ.

4 ಪಹಣಿ ಪತ್ರಿಕೆಗಳನ್ನು ಹಾಜರು ಮಾಡಿದ್ದು ಅವುಗಳನ್ನು ನಿಪಿ-1 ರಿಂದ 4 ಎಂದು, 1 ಕರ ನಿರ್ಧರಣಾ ಪಟ್ಟಿಯ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ಅದನ್ನು ನಿಪಿ-5 ಎಂದು, ಗ್ರಾಮ ನಮೂನೆ 8 ರ ದೃಢೀಕೃತ ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-6 ಎಂದು , ಗ್ರಾಮ ನಮೂನೆ ನಂ. 24/ಎ ರ ದೃಢೀಕೃತ ಪ್ರತಿಯನ್ನು ಹಾಜರು ಮಾಡಿದ್ದು ನಿಪಿ-7 ಎಂದು, 2 ಮ್ಯುಟೇಷನ್‌ಗಳ ದೃಢೀಕೃತ ಪ್ರತಿಗಳನ್ನು ಹಾಜರು ಮಾಡಿದ್ದು ಅವುಗಳನ್ನು ನಿಪಿ-8 ಮತ್ತು 9 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ** ಪ್ರತಿವಾದಿಯ ಪರ ಶ್ರೀ ಎಂ ಬಿ ಪಿ ವಕೀಲರಿಂದಃ

ಗೈರು ಹಾಜರು, ನ್ಯಾಯ ಮತ್ತು ಸಮ್ಮತಿಯ ಆಧಾರದ ಮೇಲೆ ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

Sd/-xxxx

ಓ ಹೇ ಕೇ ಸರಿ ಇದೆ.

ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,

ಹಿರೇಕೆರೂರು.